# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 08-04-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಶ್ರೀ ಪಾಷಾ, ಸ್ಥಳೀಯರು,
3. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,
4. ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

- ವಾರ್ಡ್ ವ್ಯಾಪ್ತಿಯ ಡೇವಿಸ್ ರಸ್ತೆಯಲ್ಲಿ ಹಾಗೂ ಇತರೆ ಪ್ರದೇಶಗಳಲ್ಲಿ ಚರಂಡಿಗಳಲ್ಲಿ ಡೆಬ್ರೀಸ್ ತುಂಬಿ ಚರಂಡಿ ನೀರು ರಸ್ತಗೆ ಹರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ ವಾರ್ಡ್ ವ್ಯಾಪ್ತಿಯ ಚರಂಡಿಯಲ್ಲಿ ತುಂಬಿರುವ ಹೂಳನ್ನು ತೆಗೆದು ಚರಂಡಿ ನೀರು ಸರಾಗವಾಗಿ ಹರಿಯಲು ಅನುವು ಮಾಡಿಕೊಡಲು ಸಭೆಯ ಗಮನಕ್ಕೆ ತಂದಾಗ ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ಮಾಹಿತಿ ನೀಡಲು ಸೂಚಿಸಲಾಯಿತು.

- ವಾರ್ಡ್ ವ್ಯಾಪ್ತಿಯ 3ನೇ ಅಡ್ಡರಸ್ತೆಯಲ್ಲಿ ಮೀನು ಮಾರಾಟ ಮಾಡಲು ಅಂಗಡಿ ಮಾಲೀಕರು ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿದ್ದು, ಇದರಿಂದ ಸದರಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಅಭಿಯಂತರರಿಗೆ ಈ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಒತ್ತುವರಿಯಾಗಿದ್ದಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ನಾಗಯ್ಯನ ಪಾಳ್ಯ ಹಾಗೂ ಇತರೆ ಮುಖ್ಯರಸ್ತೆ ಹಾಗೂ ಅಡ್ಡರಸ್ತೆಗಳಲ್ಲಿ ವಾಹನ ಸವಾರರು ಎಲ್ಲಂದರಲ್ಲಿ ವಾಹನ ನಿಲುಗಡೆ ಮಾಡುತ್ತಿದ್ದು, ಅಂತಹ ಸ್ಥಳಗಳಲ್ಲಿ ನಿಲುಡೆ ಮಾಡುವ ವಾಹನಗಳ ಮಾಲೀಕರ ವಿರುದ್ಧ ಕ್ರಮ ವಹಿಸಲು ಹಾಗೂ ಅಂತಹ ಸ್ಥಳಗಳಲ್ಲಿ "No Parking"

ಬೋರ್ಡ್‌ಗಳನ್ನು ಅಳವಡಿಸಲು ಕ್ರಮ ವಹಿಸಲು ಸಂಚಾರಿ ಪೊಲೀಸ್ ಇಲಾಖೆಗೆ ತಿಳಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

***ಪ್ರತಿಯನ್ನು***

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.